# Akashvani : Bangalore
# Regional Bulletin In Kannada
# 29.11.2024 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಪ್ರಧಾನಮಂತ್ರಿ ಆಯುಷ್ಮಾನ್ ಭಾರತ್ ಯೋಜನೆ; ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ೨ ಸಾವಿರದ ೨೧ ಕೋಟಿ ರೂಪಾಯಿ ಅನುದಾನ

೨. ಸಚಿವ ಸಂಪುಟ ವಿಸ್ತರಣೆ ಸದ್ಯಕ್ಕಿಲ್ಲ- ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೩. ಕೇಂದ್ರ ಸರ್ಕಾರ ನಬಾರ್ಡ್ ಹಣ ಕಡಿತಗೊಳಿಸದಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯಮಂತ್ರಿ ಮನವಿ

೪. ಬಳ್ಳಾರಿ ಸರ್ಕಾರಿ ಆಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣ; ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ರಾಜೀನಾಮೆಗೆ ಬಿಜೆಪಿ ಆಗ್ರಹ

೫. ತುಮಕೂರಿನಲ್ಲಿ ರಾಜ್ಯದ ಹಿರಿಯ ಸಹಕಾರಿಗಳಿಗೆ ಸಚಿವ ಕೆ.ಎನ್.ರಾಜಣ್ಣ ಸಹಕಾರ ರತ್ನ ಪ್ರಶಸ್ತಿ ಪ್ರದಾನ

<><*<><>*><>

ಕರ್ನಾಟಕದಲ್ಲಿ ಪ್ರಧಾನಮಂತ್ರಿ ಆಯುಷ್ಮಾನ್ ಭಾರತ್ ಯೋಜನೆಯ ಲಾಭ ಜನರಿಗೆ ತಲುಪುವಂತಾಗಲು ಹಲವು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ೨ ಸಾವಿರದ ೨೧ ಕೋಟಿ ರೂಪಾಯಿಗಳ ಅನುದಾನ ನೀಡಲಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಮೈಸೂರು-ಕೊಡುಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರ್ನಾಟಕದಲ್ಲಿ ೭೦೦ಕ್ಕೂ ಅಧಿಕ ಆಯುಷ್ಮಾನ್ ಆರೋಗ್ಯ ಮಂದಿರಗಳ ನಿರ್ಮಾಣ, ಬಲವರ್ಧನೆ ಹಾಗೂ ೩೦ ಕೇಂದ್ರೀಕೃತ ಪ್ರಯೋಗಾಲಯಗಳ ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ. ಎಲ್ಲ ಜಿಲ್ಲೆಗಳ ಆಯುಷ್ಮಾನ್ ಆರೋಗ್ಯ ಮಂದಿರ ಹಾಗೂ ಘಟಕ ಆರೋಗ್ಯ ಕೇಂದ್ರಗಳನ್ನು ಸದೃಢಗೊಳಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ದೇಶದ ನಾಗರಿಕರಿಗೆ ಉತ್ತಮ ಆರೋಗ್ಯ ಸೇವೆ ಕೈಗೆಟುಕುವ ದರದಲ್ಲಿ ಲಭ್ಯವಾಗಲು ಪಿಎಂ ಆಯುಷ್ಮಾನ್ ಆರೋಗ್ಯ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಕೇಂದ್ರ ಸರ್ಕಾರ ತಾಂತ್ರಿಕ ಹಾಗೂ ಹಣಕಾಸು ನೆರವು ನೀಡುತ್ತದೆ. ಸೌಲಭ್ಯಗಳನ್ನು ಒದಗಿಸಿ ಜಾರಿಗೊಳಿಸುವುದು ರಾಜ್ಯಗಳ ಜವಾಬ್ದಾರಿಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಸಂಪುಟ ವಿಸ್ತರಣೆ, ಪುನರ್‌ರಚನೆ ಉದ್ದೇಶ ಸದ್ಯಕ್ಕಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಧ್ಯಮಗಳೇ ಸಂಭವನೀಯ ಸಚಿವರ ಪಟ್ಟಿಯನ್ನೂ ಪ್ರಕಟಿಸುತ್ತಿದ್ದು, ಸಂಪುಟ ಪುನರ್‌ರಚನೆ ಕುರಿತಾದ ಪ್ರಶ್ನೆಗಳಿಗೆ ಮಾಧ್ಯಮಗಳೇ ಉತ್ತರಿಸಬೇಕು ಎಂದು ತಿಳಿಸಿದ್ದಾರೆ. ಸಂಪುಟ ಪುನರ್‌ರಚನೆ, ವಿಸ್ತರಣೆ ಕುರಿತಂತೆ ರಾಹುಲ್ ಗಾಂಧಿ ಅಥವಾ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಚರ್ಚೆ ಮಾಡಿಲ್ಲ ಎಂದು ತಿಳಿಸಿದ್ದಾರೆ. ಹಾಸನದಲ್ಲಿ ಡಿಸೆಂಬರ್ ೫ರಂದು ಕಾಂಗ್ರೆಸ್ ಪಕ್ಷ ಹಾಗೂ ಹಿಂದುಳಿದ ವರ್ಗಗಳ ಒಕ್ಕೂಟದ ಆಶ್ರಯದಲ್ಲಿ ಸ್ವಾಭಿಮಾನಿ ಸಮಾವೇಶ ಅಯೋಜಿಸಲಾಗಿದೆ. ಸಮಾವೇಶಕ್ಕೆ ಎಐಸಿಸಿ ಅಧ್ಯಕ್ಷರು ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಜ್ಯ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರನ್ನೂ ಆಹ್ವಾನಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ರಾಜ್ಯದ ರೈತರಿಗೆ ನೀಡಬೇಕಾಗಿದ್ದ ನಬಾರ್ಡ್ ಹಣದಲ್ಲಿ ಶೇಕಡ ೫೮ ರಷ್ಟು ಕೇಂದ್ರ ಸರ್ಕಾರ ಕಡಿತಗೊಳಿಸಿರುವುದರಿಂದ ರೈತರು ಅಧಿಕ ಬಡ್ಡಿಗೆ ಸಾಲಕೊಡುವ ಲೇವಾದೇವಿದಾರರ ಸುಳಿಗೆ ಸಿಲುಕಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಳವಳ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ ಅವರು, ರೈತರಿಗೆ ನೀಡುತ್ತಿದ್ದ ಸಬ್ಸಿಡಿ ಸಾಲ ಕಡಿತಗೊಳಿಸಿದ್ದರಿಂದ ರಾಜ್ಯದಲ್ಲಿ ಮತ್ತು ದೇಶದಲ್ಲಿ ಆಹಾರ ಉತ್ಪಾದನೆಯ ಮೇಲೆ ಕೆಟ್ಟ ಪರಿಣಾಮ ಬೀರಲಿದೆ ಎಂದು ತಿಳಿಸಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ೫ ಸಾವಿರ ಕೋಟಿ ರೂಪಾಯಿ ಘೋಷಿಸಿ ಒಂದು ಪೈಸೆಯನ್ನೂ ಕೊಡಲಿಲ್ಲ. ಫೆರಿಫೆರಲ್ ರಿಂಗ್ ರಸ್ತೆಗೂ ಕೊಡಲಿಲ್ಲ. ಇವೆಲ್ಲದರಿಂದ ೧೧ ಸಾವಿರ ಕೋಟಿ ರೂಪಾಯಿ ರಾಜ್ಯಕ್ಕೆ ನಷ್ಟವಾಗಿದ್ದನ್ನೂ ಪ್ರಧಾನಮಂತ್ರಿಯವರಿಗೆ ತಿಳಿಸಲಾಗಿದೆ. ನಬಾರ್ಡ್ ಮೂಲಕ ಆಗಿರುವ ಅನ್ಯಾಯವನ್ನು ಸರಿಪಡಿಸಲು ಮನವಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ತುಮಕೂರು ನಗರಕ್ಕೆ ಡಿಸೆಂಬರ್ ೨ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಲಿದ್ದು, ೯೩೮ ಕೋಟಿ ವೆಚ್ಚದ ೮೨೫ ಕೋಟಿ ವೆಚ್ಚದ ೮೨೫ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತಿಳಿಸಿದ್ದಾರೆ. ತುಮಕೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧ ಲಕ್ಷ ೫೦ ಸಾವಿರ ಫಲಾನುಭವಿಗಳಿಗೆ ೨೨೬ ಕೋಟಿ

ಫಲಾನುಭವಿಗಳಿಗೆ ೨೨೬ ಕೋಟಿ ೯೬ ಲಕ್ಷ ವೆಚ್ಚದ ಸವಲತ್ತು, ಸಲಕರಣೆ ಮತ್ತು ಧನ ಸಹಾಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ವಿತರಿಸಲಿದ್ದಾರೆ. ವಸಂತ ನರಾಸಪುರ ಕೈಗಾರಿಕಾ ಪ್ರದೇಶದಲ್ಲಿ ೪೧ ಎಕರೆ ಪ್ರದೇಶದಲ್ಲಿ ೧೫೦ ಎಕರೆ ಪ್ರದೇಶದಲ್ಲಿ ೧೫೦ ಕೋಟಿ ವೆಚ್ಚದ ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಮುಖ್ಯಮಂತ್ರಿಗಳು ಚಾಲನೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ ಎಂದು ಪರಮೇಶ್ವರ್ ಹೇಳಿದ್ದಾರೆ.

<><*<><>*><>

ಬಳ್ಳಾರಿಯ ಎರಡು ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆ ನಂತರ ಐವರು ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ್ ರಾಜಿನಾಮೆ ನೀಡುವಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಳಂಬ ಮಾಡದೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಕಳೆದ ಹತ್ತು ದಿನಗಳಲ್ಲಿ ಬಳ್ಳಾರಿ ಜಿಲ್ಲಾ ಆಸ್ಪತ್ರೆ ಮತ್ತು ವಿಮ್ಸ್ ಆಸ್ಪತ್ರೆಯಲ್ಲಿ ಐವರು ಬಾಣಂತಿಯರು ಸಾವನಪ್ಪಿದ್ದು, ಸಾವಿನ ಬಗ್ಗೆ ತಜ್ಞರ ಸಮಿತಿ ನೀಡಿದ ವರದಿಯನ್ನು ಗೌಪ್ಯವಾಗಿಟ್ಟಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಗ್ರಾಮೀಣ ಪ್ರದೇಶದಲ್ಲಿ ನಡೆಯುತ್ತಿರುವ ಆರ್ಥಿಕ ಚಟುವಟಿಕೆಗೆ ಹೈನುಗಾರಿಕೆ ಸಹಕಾರಿಯಾಗಿದ್ದು, ಹೆಚ್ಚು ಜನರು ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಆರ್ಥಿಕ ಸ್ವಾವಲಂಬನೆ ಸಾಧಿಸಬೇಕು ಎಂದು ಸಹಕಾರಿ ಸಚಿವ ಕೆ.ಎನ್.ರಾಜಣ್ಣ ಕರೆ ನೀಡಿದ್ದಾರೆ. ತುಮಕೂರಿನಲ್ಲಿಂದು ನಡೆದ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ರಾಷ್ಟ್ರದ ಅಭಿವೃದ್ಧಿಯಲ್ಲಿ ಗ್ರಾಮೀಣ ಭಾಗದ ಜನರ ಕೊಡುಗೆ ಹೆಚ್ಚಿದೆ. ಹಾಲು ಉತ್ಪಾದನೆ ವೆಚ್ಚಕ್ಕಿಂತ ಕಡಿಮೆ ದರಕ್ಕೆ ಹಾಲನ್ನು ರಾಜ್ಯದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸಹಕಾರ ಕಾಯ್ದೆ ತಿದ್ದುಪಡಿಯಿಂದ ಎಲ್ಲ ಸಮುದಾಯಗಳಿಗೂ ಅಧಿಕಾರ ಸಿಗಲಿದ್ದು, ಈ ಮಸೂದೆಗೆ ರಾಜ್ಯಪಾಲರು ಒಪ್ಪಿಗೆ ಸೂಚಿಸಲಿದ್ದಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಹಕಾರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ರಾಜ್ಯದ ಹಿರಿಯ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

<><*<><>*><>

ದೇಶದ ಮೊಟ್ಟಮೊದಲ ಬಿದಿರು ವಸ್ತುಪ್ರದರ್ಶನ ಗ್ಯಾಲರಿಯನ್ನು ಬೆಂಗಳೂರಿನಲ್ಲಿಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಹೆಚ್ಚು ವಾಹನಗಳು ಓಡಾಡುವ ನಗರ ಪ್ರದೇಶದಲ್ಲಿ ಬಿದಿರು ಬೆಳೆಸಿದರೆ ಇಂಗಾಲದ ಹೊರಸೂಸುವಿಕೆಯಿಂದ ಆಗಬಹುದಾದ ದುಷ್ಪರಿಣಾಮ ತಡೆಯಬಹುದು. ಈ ನಿಟ್ಟಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿದಿರು ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

ಬಿದಿರು ಇಂಗಾಲ ಆಮ್ಲವನ್ನು ಹೀರಿಕೊಳ್ಳುವುದಲ್ಲದೆ, ಅತಿ ಹೆಚ್ಚು ಆಮ್ಲಜನಕ ಹೊರಸೂಸುತ್ತದೆ. ಇದರಿಂದ ನಗರವಾಸಿಗಳಿಗೆ ಪ್ರಾಣವಾಯು ಲಭಿಸುತ್ತದೆ. ಬಿದಿರು ಅರಣ್ಯ ಸಂಪತ್ತಾಗಿದ್ದು ಹುಲ್ಲಿನ ಜಾತಿಗೆ ಸೇರಿದ ಬಿದಿರು ಆನೆಗಳಿಗೆ ಪ್ರಿಯವಾದ ಆಹಾರವೂ ಆಗಿದೆ. ಕಾಡಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಿದಿರು ಬೆಳೆಸಿದರೆ ನೈಸರ್ಗಿಕ ಬ್ಯಾರಿಕೇಡ್ ನಂತೆ ಕಾರ್ಯನಿರ್ವಹಿಸುತ್ತವೆ. ಇದರಿಂದ ವನ್ಯಜೀವಿಗಳು ನಾಡಿಗೆ ಬರುವುದನ್ನು ತಡೆಯಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

<><*<><>*><>

ಕಂದಾಯ ಸಚಿವ ಕೃಷ್ಣಭೈರೇಗೌಡ ಅವರ ಅಧ್ಯಕ್ಷತೆಯಲ್ಲಿಂದು ಬೆಂಗಳೂರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಯಿತು. ಚಿತ್ರದುರ್ಗ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಪರೆನ್ಸ್ ಮೂಲಕ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಂದಾಯ, ಬಗರ್ ಹುಕುಂ, ನಮೂನೆ ೧ ರಿಂದ ೫೪ ಪ್ರಕರಣ, ಕಂದಾಯ ಗ್ರಾಮಗಳ ರಚನೆ ಹಕ್ಕುಪತ್ರ ವಿತರಣೆ, ನ್ಯಾಯಾಲಯ ಪ್ರಕರಣ ವಿಲೇವಾರಿ, ವಿಪತ್ತು ನಿರ್ವಹಣೆ, ಪರಿಹಾರ ವಿತರಣೆ ಹಾಗೂ ಇತರೆ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪಹಣಿ-ಆಧಾರ್ ಜೋಡಣೆ ಕಾರ್ಯವನ್ನು ಪ್ರಥಮಾದ್ಯತೆಯಾಗಿ ಪರಿಗಣಿಸಿ ಶೇಕಡ ೧೦೦ರಷ್ಟು ಪ್ರಗತಿ ಸಾಧಿಸಬೇಕು. ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸರ್ಕಾರಿ ಆಸ್ತಿಗಳನ್ನು ಗುರುತಿಸಿ, ಹದ್ದುಬಸ್ತು ಮಾಡಿಕೊಂಡು ಲ್ಯಾಂಡ್ ಬೀಟ್ ದತ್ತಾಂಶದಲ್ಲಿ ಅಪ್‌ಲೋಡ್‌ನಲ್ಲಿ ಪ್ರಗತಿ ಸಾಧಿಸಬೇಕು ಎಂದು ಸಚಿವರು ಸೂಚಿಸಿದ್ದಾರೆ ಎಂದು ತಿಳಿಸಿದರು.

<><*<><>*><>

ಬಿಬಿಎಂಪಿ ಕಂದಾಯ ವಿಭಾಗಗಕ್ಕೆ ಸಂಬಂಧಿಸಿದ ಅಧಿಕಾರಿಗಳು ಪ್ರತಿ ಬುಧವಾರ ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್" ಕೊರತೆಗಳ ಅದಾಲತ್" ನಡೆಸಿ ಸಾರ್ವಜನಿಕರ ಕುಂದುಕೊರತೆಗಳು ಮತ್ತು ಮನವಿಗಳನ್ನು ವಿಲೇವಾರಿ ಮಾಡುವಂತೆ ಕಂದಾಯ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಆದೇಶಿಸಿದ್ದಾರೆ. ಪಾಲಿಕೆಯ ಮುಖ್ಯ ಆಯುಕ್ತರ ನಿರ್ದೇಶನದಂತೆ ನಿರ್ದೇಶನದಂತೆ ಕಂದಾಯ ವಿಭಾಗದ ಅಧಿಕಾರಿಗಳು ಕಛೇರಿಗಳಲ್ಲಿ ಪ್ರತಿ ಬುಧವಾರ ಬೆಳಗ್ಗೆ ೧೦.೦೦ ಗಂಟೆಯಿಂದ ಮಧ್ಯಾಹ್ನ ೨ ಮಧ್ಯಾಹ್ನ ೨ ಗಂಟೆಯವರೆಗೆ ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚಿಸಿದ್ದಾರೆ. ಪ್ರತಿ ಬುಧವಾರದ "ಕಂದಾಯ ಮತ್ತು ಕುಂದು "ಕಂದಾಯ ಮತ್ತು ಕುಂದು ಕೊರತೆಗಳ ಅದಾಲತ್" ಕಾರ್ಯಕ್ಷಮತೆಯ ಬಗ್ಗೆ ಪ್ರತಿ ಸೋಮವಾರ ಮುಖ್ಯ ಆಯುಕ್ತರು

ಆಯುಕ್ತರು ಅಧ್ಯಕ್ಷತೆಯಲ್ಲಿ "ಸಕಾಲ ಮತ್ತು ಕುಂದುಕೊರತೆ" ಪರಿಶೀಲನಾ ಸಭೆಯನ್ನು ನಡೆಸಲಾಗುತ್ತದೆ ಎಂದು ತಿಳಿಸಿದ್ದಾರೆ. ಎಂದು ತಿಳಿಸಿದ್ದಾರೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು...**

೧. ದೇಶದ ನಾಗರೀಕರ ಪ್ರಮುಖ ವಿಶಿಷ್ಠ ಗುರುತಿನ ಚೀಟಿಯಾಗಿರುವ ಆಧಾರ್ ಕಾರ್ಡ್, ಅಕ್ರಮ ವಲಸಿಗರಿಗೆ ಮತ್ತು ನುಸುಳುಕೋರರಿಗೆ ದೊರಕದಂತೆ ಆಧಾರ್ ನೋಂದಣಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವವರು ಅತ್ಯಂತ ಜಾಗರೂಕತೆ ವಹಿಸಬೇಕು ಎಂದು ಉತ್ತರಕನ್ನಡ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ್ ಸೂಚನೆ ನೀಡಿದ್ದಾರೆ.

೨. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೧ ಸಾವಿರದ ೫೩೭ ನಕಲಿ ಕಟ್ಟಡ ಕಾರ್ಮಿಕ ಕಾರ್ಡುಗಳನ್ನು ರದ್ದುಪಡಿಸಲಾಗಿದೆ. ಜಿಲ್ಲೆಯಲ್ಲಿ ನಕಲಿ ಕಾರ್ಡ್ ರದ್ಧತಿ ಅಭಿಯಾನ ಕೈಗೊಳ್ಳಲಾಗಿದೆ ಎಂದು ಮಂಗಳೂರು ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೩. ಅಂಗನವಾಡಿಗಳಿಗೆ ಬರುವ ಮಕ್ಕಳಲ್ಲಿನ ಅಪೌಷ್ಠಿಕತೆಯನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಬಾಗಲಕೋಟೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಸೂಚಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗನವಾಡಿ ಮೇಲ್ವಿಚಾರಕಿಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಈ ವಿಷಯ ತಿಳಿಸಿದ್ದಾರೆ.

೪. ಕೋಲಾರ ಜಿಲ್ಲೆಯಲ್ಲಿ ರಾಗಿ ಕಟಾವು ಮಾಡುವ ಯಂತ್ರಕ್ಕೆ ಪ್ರತಿ ಗಂಟೆಗೆ ೨ ಸಾವಿರದ ೭೦೦ ರೂಪಾಯಿ ಮೀರದಂತೆ ಬಾಡಿಗೆಯನ್ನು ನಿಗದಿ ಪಡಿಸಿದೆ. ತಪ್ಪಿದಲ್ಲಿ ರಾಗಿ ಕಟಾವು ಯಂತ್ರದ ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ.

೫. ಚಾಮರಾಜನಗರದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಕಾರ್ಯಕ್ಷಮತೆ ಹೆಚ್ಚಳ ಮತ್ತು ವೇಗವರ್ಧನೆ ಯೋಜನೆಯಡಿ ಉತ್ಪನ್ನಗಳ ರಫ್ತು ಕುರಿತ ಒಂದು ದಿನದ ಅರಿವು ಕಾರ್ಯಗಾರವನ್ನು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷ ಎಂ.ಜಿ ರಾಜಗೋಪಾಲ್ ಇಂದು ಉದ್ಘಾಟಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**